49

**<u>ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.</u>**

## ವಿಷಯ

ಸರ್ಕಾರಿ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಶೈಕ್ಷಣಿಕ ಗುಣಮಟ್ಟ ಕುಂಠಿತವಾಗುತ್ತಿರುವ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

## ಸರ್ಕಾರದ ಉತ್ತರ

ಕಾಲೇಜು ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಪ್ರಸ್ತುತ ಒಟ್ಟು 1352 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಖಾಲಿ ಇರುತ್ತವೆ. ದಿನಾಂಕ: 03.08.2019 ರ ಸರ್ಕಾರದ ಪತ್ರ ಸಂಖ್ಯೆ: ಇಡಿ 185 ಡಿಸಿಇ 2018 ರಲ್ಲಿ 2019-20 ಮತ್ತು 2020-21ನೇ ಸಾಲಿನಲ್ಲಿ ಒಟ್ಟು 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ. ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ದಿನಾಂಕ: 10.02.2020ರ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019 (ಭಾಗ-3) ರಲ್ಲಿ ಕರಡು ವಿಶೇಷ ನೇಮಕಾತಿ ನಿಯಮಗಳನ್ನು ಹೊರಡಿಸಿದ್ದು, ಸಾರ್ವಜನಿಕರಿಂದ ಆಕ್ಷೇಪಣೆ/ಸಲಹೆಗಳನ್ನು ಆಹ್ವಾನಿಸಲಾಗಿದೆ. ಸರ್ಕಾರದಿಂದ ಅಂತಿಮ ವಿಶೇಷ ನೇಮಕಾತಿ ನಿಯಮಗಳನ್ನು ಹಾರಿಗೊಳಸಿದ ನಂತರ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕಾರ್ಯಭಾರಕ್ಕನುಗುಣವಾಗಿ ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು.

ಮುಂದುವರೆದು, ವಿದ್ಯಾರ್ಥಿಗಳ ಶೈಕ್ಷಣಿ ಹಿತದೃಷ್ಟಿಯಿಂದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಲಿ ಇರುವ /ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅರ್ಹ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಂಡು, ಪಾಠ-ಪ್ರವಚನಗಳನ್ನು ನಡೆಸಲಾಗುತ್ತಿದೆ. ಇದರಿಂದ ಯಾವುದೇ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ.

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)
ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಇಡಿ 82 ಡಿಸಿಇ 2020